# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 489

ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13-12-2018

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ | Reply |
|---|---|---|---|
| ಅ | ರಾಜ್ಯದಲ್ಲಿ 6ನೇ ವೇತನ ಆಯೋಗದ ವರದಿಯನ್ನು ಜಾರಿಗೆ ತಂದಿದ್ದರೂ ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರುಗಳಿಗೆ ವೇತನದಲ್ಲಿರುವ ತಾರತಮ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು | Yes |
| ಆ | ದೇಶದಲ್ಲಿ ಹಲವು ರಾಜ್ಯಗಳು ಅಲ್ಲಿನ ನೌಕರರುಗಳಿಗೆ ಕೇಂದ್ರ ಸರ್ಕಾರದ ಸರ್ಕಾರಿ ನೌಕರರಿಗೆ ಸಮಾನಾಂತರವಾಗಿ ವೇತನ/ ಪಿಂಚಣಿ ಸೌಲಭ್ಯವನ್ನು ನೀಡುತ್ತಿದ್ದು, ನಮ್ಮ ರಾಜ್ಯದಲ್ಲಿ ಸದರಿ ಸೌಲಭ್ಯವನ್ನು ಜಾರಿಗೆ ತರದಿರಲು ಕಾರಣವೇನು; | ಕೇಂದ್ರ ವೇತನ ಆಯೋಗಗಳ ಶಿಫಾರಸು ಹಾಗೂ ಕೇಂದ್ರ ಸರ್ಕಾರದ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ತನ್ನದೇ ಆದ ವೇತನ ಆಯೋಗ/ವೇತನ ಸಮಿತಿಗಳಂತಹ ತಜ್ಞ ಸಮಿತಿಗಳ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆಗಳು ಮತ್ತು ಪಿಂಚಣಿಯನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬಂದಿರುತ್ತದೆ. ಆದುದರಿಂದ, ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಗಳನ್ನು ಕೇಂದ್ರ ಸರ್ಕಾರದ ಹಾಗೂ ಇತರೆ ರಾಜ್ಯ ಸರ್ಕಾರಗಳ ನೌಕರರ ವೇತನದೊಂದಿಗೆ ಹೋಲಿಸಲು ಬರುವುದಿಲ್ಲ. | Traditionally, the Pay Allowance and Pension of State Government employees are being revised from time to time as per the recommendations of the expert bodies like Pay Commission/ Official Pay Committees of the State Government and the State is neither follows the recommendations of the Central Pay Commission nor the period of revision as is done by the Central Government. Hence, the pay scales of the employees of Central Government and State Government are not comparable. |
| ಇ | ರಾಜ್ಯದ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರದ ಸರ್ಕಾರಿ ನೌಕರರಿಗೆ ನೀಡುತ್ತಿರುವ ಕೇಂದ್ರ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೆ ತರಲು ಯಾವ ಕ್ರಮಕೈಗೊಳ್ಳಲಾಗುವುದು; | ಮೇಲಿನ (ಆ) ಉತ್ತರದಿಂದಾಗಿ ಉದ್ಭವಿಸುವುದಿಲ್ಲ. | Does not arise in view of answer to (ಆ) above. |

<table>
<tr><td>ಈ</td><td>ಈ ರೀತಿ ವೇತನ ತಾರತಮ್ಯವನ್ನು ನಿವಾರಿಸುವುದರಿಂದ ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸಬಹುದೆಂಬ ಕಲ್ಪನೆಯಿಲ್ಲದಿರಲು ಕಾರಣವೇನು;</td><td rowspan="2">ಅಖಿಲ ಭಾರತ ಸೇವೆಯ ಹುದ್ದೆಗಳೂ ಸೇರಿದಂತೆ, ಕೇಂದ್ರ ಮತ್ತು ರಾಜ್ಯ ಸರ್ಕಾರಿ ಸೇವೆಗಳಿಗೆ ಸೇರಿದ ಹುದ್ದೆಗಳ ಸೇವಾ ನಿಬಂಧನೆ, ಹುದ್ದೆಗಳ ಪದನಾಮ, ಅರ್ಹತೆಯ ಮಾನದಂಡಗಳು, ನೇಮಕಾತಿ ವಿಧಾನ, ಕರ್ತವ್ಯ ಮತ್ತು ಕಾರ್ಯ ವ್ಯಾಪ್ತಿಗಳಲ್ಲಿರುವ ಮೂಲಭೂತ ಭಿನ್ನತೆಗಳಿಂದಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅವುಗಳದೇ ಆದ ವೇತನ ರಚನೆ ಮತ್ತು ನಿಯಮಗಳನ್ನು ರೂಪಿಸಿಕೊಂಡು ಬಂದಿರುವುದರಿಂದ, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಹಂತಗಳ ಹುದ್ದೆ ಮತ್ತು ಅವುಗಳಿಗೆ ನೀಡಲಾಗುತ್ತಿರುವ ವೇತನ ಭತ್ಯೆಗಳನ್ನು ಹೋಲಿಕೆ ಮಾಡಲು ಬರುವುದಿಲ್ಲ.</td><td rowspan="2">As the State and Central Governments are following their own pay structure and pay rules, in view of the fundamental difference as to the mode of recruitment, service conditions, designation of posts, eligibility factors, duties and jurisdictions between the posts in State Government and Central Government including All India Service posts, the pay and allowances payable to different categories of posts in Central & State Governments are not comparable.</td></tr>
<tr><td>ಉ</td><td>ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಖಿಲ ಭಾರತ ಸೇವೆಯ ಅಧಿಕಾರಿಗಳಿಗೆ ಈಗಾಗಲೇ 7ನೇ ವೇತನ ಆಯೋಗದ ಶಿಫಾರಸ್ಸಿನಡಿಯಲ್ಲಿ ಸಂಬಳ ಸೌಲಭ್ಯವನ್ನು ನೀಡುತ್ತಿರುವುದರಿಂದ ಅವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ ಈ ತಾರತಮ್ಯ ಎಸಗಿರುವುದು ಅನ್ಯಾಯವಲ್ಲವೇ?</td></tr>
</table>

ಸಂಖ್ಯೆ: ಆಇ 30 ಎಸ್‌ಆರ್‌ಪಿ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ